ಇ) ಮೂಲಭೂತ ಸೌಕರ್ಯಗಳಿಲ್ಲದೆ ಮಕ್ಕಳಿಗೆ ಶೈಕ್ಷಣಿಕ ಕಾರ್ಯಕ್ರಮವನ್ನು ನೀಡುತ್ತಿರುವ ಪರಿಸ್ಥಿತಿಯಿರುವುದು ಸರ್ಕಾರದ ಗಮನಕ್ಕೆ ಬಂದಿದಿಯೇ;

ಈ) ಬಂದಿದ್ದಲ್ಲಿ ಮೂಲಭೂತ ಸೌಲಭ್ಯಗಳನ್ನು ಒದಗಿಸುವಲ್ಲಿ ಸರ್ಕಾರ ಕ್ರಮ ಕೈಗೊಳ್ಳುವುದೇ?

ಅ) ೧೭೭೫ ಅಂಗನವಾಡಿ ಕೇಂದ್ರಗಳು ತಾಲ್ಲೂಕುವಾರು ವಿವರ ಈ ಕೆಳಕಂಡಂತಿರುತ್ತದೆ.

ಮಂಗಳೂರು ನಗರ	೧೪೧
ಬೆಳ್ತಂಗಡಿ	೧೯೩
ಸೂಳ್ಯ	೧೧೬
ಪುತ್ತೂರು	೩೬೩
ಬಂಟ್ವಾಳ	೫೩೭
ಮಂಗಳೂರು (ಗ್ರಾ)	೪೨೫
ಒಟ್ಟು	**೧೭೭೫**

ಆ) ೩೩ ಅಂಗನವಾಡಿಗಳು.

ಇ) ಬಂದಿದೆ.

ಈ) ಸರ್ಕಾರವು ಮೂಲಭೂತ ಸೌಲಭ್ಯದ ಅವಶ್ಯಕತೆಯನ್ನು ಮನಗಂಡು ಹಾಲಿ ನಿರ್ಮಾಣವಾಗುತ್ತಿರುವ ಅಂಗನವಾಡಿ ಕಟ್ಟಡಗಳಲ್ಲಿ ನೀರು, ಶೌಚಾಲಯ, ಅಡುಗೆ ಕೋಣೆಯನ್ನು ಕಡ್ಡಾಯವಾಗಿ ನಿರ್ಮಾಣ ಮಾಡಲಾಗುತ್ತಿದೆ. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಜಿಲ್ಲಾ ಪಂಚಾಯತ್ ವತಿಯಿಂದ ಮೂಲಭೂತ ಸೌಲಭ್ಯಗಳಿಲ್ಲದ ೪೦೧ ಅಂಗನವಾಡಿ ಕೇಂದ್ರಗಳಿಗೆ ಶೌಚಾಲಯ ನಿರ್ಮಾಣದ ಬಗ್ಗೆ ಕ್ರಿಯಾ ಯೋಜನೆ ಅನುಮೋದನೆಯಾಗಿದ್ದು ಈ ಪ್ರಕಾರ ಸಾರ್ವಜನಿಕರಿಂದ ವಂತಿಗೆ ಸಂಗ್ರಹಿಸಿದ ಪಟ್ಟಿಯನ್ನು ಜಿಲ್ಲಾ ಪಂಚಾಯತ್ ಕಛೇರಿಗೆ ಸಲ್ಲಿಸಿದ್ದು ಶೌಚಾಲಯ ನಿರ್ಮಾಣ ಪ್ರಕ್ರಿಯೆ ಪ್ರಾರಂಭಗೊಂಡಿದೆ.

ಮೆಣಸಿನಕಾಯಿ ಬೆಂಬಲ ಬೆಲೆ ನೀಡುವುದು

ಶ್ರೀ ಸೂರ್ಯನಾರಾಯಣ ರೆಡ್ಡಿ ಎನ್ (ಕುರುಗೋಡು) :– ಮಾನ್ಯ ಕೃಷಿ ಮಾರುಕಟ್ಟೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೆಣಸಿನ ಕಾಯಿ ಬೆಲೆ ತೀವ್ರವಾಗಿ ಕುಸಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಆ) ಬಂದಿದ್ದಲ್ಲಿ, ಬೆಂಬಲ ಬೆಲೆ ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ಯಾವಾಗ ಕ್ರಮ ಕೈಗೊಳ್ಳಲಾಗುವುದು?

ಶ್ರೀ ಪ್ರಕಾಶ್ ಬಿ. ಹುಕ್ಕೇರಿ (ಕೃಷಿ ಮಾರುಕಟ್ಟೆ ಸಚಿವರು) :

ಅ&ಆ) ಸರ್ಕಾರವು ಪರಿಸ್ಥಿತಿಯನ್ನು ಗಮನಿಸುತ್ತಿದೆ. ಕೇಂದ್ರ ಸರ್ಕಾರವು ಈವರೆವಿಗೂ ಬೆಂಬಲ ಬೆಲೆಯನ್ನು ಘೋಷಿಸಿರುವುದಿಲ್ಲ.

ಟೊಮೆಟೊ ಬೆಳೆಗೆ ಬೆಂಬಲ ಬೆಲೆ

ಶ್ರೀ ವೆಂಕಟಮುನಿಯಪ್ಪ ಬಿ.ಪಿ (ಬೇತಮಂಗಲ) :– ಮಾನ್ಯ ಕೃಷಿ ಮಾರುಕಟ್ಟೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೋಲಾರ ಜಿಲ್ಲೆಯಲ್ಲಿ ಬೆಳೆಯುವ ಟೊಮೆಟೊ ಬೆಳೆಗೆ ಸರ್ಕಾರ ಬೆಂಬಲ ಬೆಲೆಯನ್ನು ನಿಗಧಿಪಡಿಸಲು ಉದ್ದೇಶಿಸಿದೆಯೇ;

ಆ) ಟೊಮೆಟೊ ಬೆಳೆಗಾರರಿಗೆ ಅನಾನುಕೂಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಬೆಂಬಲ ಬೆಲೆ ನಿಗದಿಪಡಿಸುವ ಅಧಿಕಾರ ಜಿಲ್ಲಾ ಹಂತದಲ್ಲಿ ಯಾವ ಅಧಿಕಾರಿಗಳಿಗೆ ವಹಿಸಲಾಗಿದೆ;

ಈ) ಬೆಲೆ ನಿಗದಿಪಡಿಸುವ ಸಮಯ ಪಡೆಯುವ ಯಾವುದಾದರೂ ಅವ್ಯವಹಾರಗಳು ಗಮನಕ್ಕೆ ಬಂದಿದೆಯೇ;

ಉ) ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ಕ್ರಮ ಕೈಗೊಂಡಿದೆಯೇ?